# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 954 |
| ಸದಸ್ಯರ ಹೆಸರು | : | ಶ್ರೀ.ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21.09.2022 |
| ಉತ್ತರಿಸುವ ಸಚಿವರು | : | ಪಶುಸಂಗೋಪನೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಕೊಪ್ಪಳ ಜಿಲ್ಲೆಯಲ್ಲಿರುವ ಪಶುವೈದ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗಳು ಹಾಗೂ 'ಡಿ' ದರ್ಜೆ ನೌಕರರುಗಳು ಸಂಖ್ಯೆ ಶೇಕಡಾ.70 ರಷ್ಟು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು; | ಪ್ರಸ್ತುತ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮದಡಿ ಭರ್ತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ.<br><br>ಕಲ್ಯಾಣ ಕರ್ನಾಟಕ ಪ್ರಾದೇಶಿಕ ವೃಂದಕ್ಕೆ ಸಂಬಂಧಿಸಿದಂತೆ 83 ಕಿರಿಯ ಪಶುವೈದ್ಯಕೀಯ ಪರೀಕ್ಷಕರು, 32 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮದಡಿ ನೇಮಕಾತಿ ಕೈಗೊಂಡ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ನೇಮಕಾತಿ ಆದೇಶ ನೀಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.<br><br>04 ಬೆರಳಚ್ಚುಗಾರರ ಹುದ್ದೆಯನ್ನು ಭರ್ತಿ ಮಾಡಿಕೊಡುವಂತೆ ಕೋರಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಖಾಲಿ ಇರುವ 'ಡಿ' ದರ್ಜೆ ಹುದ್ದೆಗಳಿಗೆದುರಾಗಿ ಈ ಕೆಳಕಂಡಂತೆ ಹೊರಗುತ್ತಿಗೆ ಆಧಾರದ ಮೇಲೆ 'ಡಿ' ದರ್ಜೆ ಹುದ್ದೆಗಳಿಗೆ ಸೇವೆಯನ್ನು ಪಡೆಯಲಾಗಿದೆ. |
| ಇ) | ಭರ್ತಿ ಮಾಡಲು ಅನುಸರಿಸುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | |

| ಕ್ರ. ಸಂ | ಜಿಲ್ಲೆಯ ಹೆಸರು | ಮಂ | ಭರ್ತಿ | ಖಾಲಿ | ಹೊರ ಗುತ್ತಿಗೆ |
|---|---|---|---|---|---|
| 1 | ರಾಯಚೂರು | 184 | 43 | 141 | 72 |
| 2 | ಕೊಪ್ಪಳ | 148 | 42 | 106 | 45 |
| 3 | ಯಾದಗಿರಿ | 156 | 66 | 90 | 59 |
| 4 | ಬೀದರ್ | 212 | 52 | 160 | 85 |
| 5 | ಕಲಬುರ್ಗಿ | 352 | 75 | 275 | 121 |
| 6 | ಬಳ್ಳಾರಿ | 107 | 27 | 80 | 25 |
| 7 | ವಿಜಯನಗರ | 159 | 53 | 106 | 35 |
| | ಒಟ್ಟು | 1318 | 358 | 960 | 442 |

ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳು ಸೇರಿದಂತೆ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳು ಹಾಗೂ 'ಡಿ' ದರ್ಜೆ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು.

ಸಂ: ಪಸಂಮೀ ಇ-156 ಪಸಸೇ 2022

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು